ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2013–14 : ಡಿಸೆಂಬರ್ 9, 2014

# ಬಾಲಭವನ ನಿರ್ವಹಣೆಗೆ ಸೆಸ್ ಸಂಗ್ರಹಣೆಗೆ ಶಿಫಾರಸ್ಸು

ಬೆಳಗಾವಿ, ಡಿಸೆಂಬರ್ 9 :

ಬಾಲಭವನಗಳ ನಿರ್ವಹಣೆಗೆ ಉಪಕರ (ಸೆಸ್) ಸಂಗ್ರಹಿಸಲು ರಾಜ್ಯ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯು ರಾಜ್ಯ ಸರ್ಕಾರಕ್ಕೆ ಶಿಫಾರಸ್ಸು ಮಾಡಿದೆ.

ರಾಜ್ಯ ವಿಧಾನ ಸಭೆಯಲ್ಲಿ ಮಂಗಳವಾರ ಮಂಡಿಸಲಾದ ಸಮಿತಿಯ ವರದಿಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಲಾಗಿದೆ.

ರಾಜ್ಯದ ಪ್ರತಿ ಸರ್ಕಾರಿ ಶಾಲೆಗಳ ಮಕ್ಕಳನ್ನು ಶೈಕ್ಷಣಿಕ ವರ್ಷದಲ್ಲಿ ಒಮ್ಮೆ ಸ್ಥಳೀಯ ಭಾಲಭವನಗಳಿಗೆ ಕಡ್ಡಾಯವಾಗಿ ಕರೆ ತಂದು, ಮಕ್ಕಳಿಗೆ ಉಚಿತ ವೀಕ್ಷಣೆ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಅವಕಾಶ ಕಲ್ಪಿಸಬೇಕು. ಪ್ರತಿ ವಿಧಾನ ಸಭಾ ಕ್ಷೇತ್ರದಲ್ಲಿ ಬಾಲಭವನ ನಿರ್ಮಾಣ ಕುರಿತಂತೆ ರಾಜ್ಯ ಸರ್ಕಾರ ಒದಗಿಸಿರುವ ಅನುದಾನದ ಖರ್ಚು ವೆಚ್ಚಗಳ ವಿವರಗಳನ್ನು ಇಲಾಖಾ ಸಿಬ್ಬಂದಿ ಸ್ಥಳೀಯ ಶಾಸಕರ ಗಮನಕ್ಕೆ ತರಬೇಕೆಂದು ಸಲಹೆ ಮಾಡಿದೆ.

ಪ್ರತಿ ತಾಲ್ಲೂಕು ಮಟ್ಟದಲ್ಲಿ ಬಾಲಭವನ ನಿರ್ಮಾಣ ಕುರಿತಂತೆ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಸಭಾ ಕಾರ್ಯಸೂಚಿಯಲ್ಲಿ ನಮೂದಿಸಬೇಕೆಂದು ಸಮಿತಿಯು ತನ್ನ ಶಿಫಾರಸ್ಸಿನಲ್ಲಿ ತಿಳಿಸಿದೆ.

ರಾಜ್ಯದಲ್ಲಿ ನಿರಾಶ್ರಿತರ ಪ್ರಮಾಣದಲ್ಲಿ ಗಣನೀಯ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ, ಭಿಕ್ಷುಕರ ನಿರಾಶ್ರಿತ ಕೇಂದ್ರಗಳಲ್ಲಿ ಪ್ರಸ್ತುತ ಇರುವ ಪ್ರವೇಶ ಸಾಮರ್ಥ್ಯವನ್ನು ಹೆಚ್ಚಳ ಮಾಡಬೇಕು ಎಂದೂ ಸಮಿತಿ ಶಿಫಾರಸ್ಸು ಮಾಡಿದೆ. ಅಲ್ಲದೆ, ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಆಸ್ತಿ ತೆರಿಗೆ ಜೊತೆಯಲ್ಲಿ ಭಿಕ್ಷುಕರ ಶ್ರೇಯೋಭಿವೃದ್ಧಿಗಾಗಿ ಸಂಗ್ರಹಿಸುತ್ತಿರುವ ಉಪಕರದ ಮೊತ್ತವನ್ನು ನಿರಾಶ್ರಿತರ ಶ್ರೇಯೋಭಿವೃದ್ಧಿಗೆ ಕಡ್ಡಾಯವಾಗಿ ನೀಡಬೇಕೆಂದು ಸಮಿತಿಯು ಸೂಚಿಸಿದೆ.

ಭಿಕ್ಷಾಟಣೆಯಲ್ಲಿ ತೊಡಗಿರುವವರನ್ನು ಪೊಲೀಸರು ಬಂಧಿಸಿ ನಿರಾಶ್ರಿತರ ಕೇಂದ್ರಗಳಿಗೆ ಕಳುಹಿಸಬೇಂದು ಸಮಿತಿ ತನ್ನ ವರದಿಯಲ್ಲಿ ತಿಳಿಸಿದೆ.

ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಲ್ಲಿ 30,000ಕ್ಕೂ ಹೆಚ್ಚು ಅಂಗನವಾಡಿಗಳಿಗೆ ಸ್ವಂತ ಕಟ್ಟಡ ಹಾಗೂ ಮೂಲ ಸೌಕರ್ಯಗಳಿಲ್ಲ. ಇವುಗಳಿಗೆ ಅಗತ್ಯ ಮೂಲ ಸೌಕರ್ಯಗಳನ್ನು ರಾಜ್ಯ ಸರ್ಕಾರ ಒದಗಿಸಬೇಕೆಂದು ಸಮಿತಿ ಸಲಹೆ ಮಾಡಿದೆ. ಈ ಕಟ್ಟಡಗಳಿಗೆ ಸೂಕ್ತ ನಿವೇಶನ ಹಾಗೂ ಮೂಲ ಸೌಕರ್ಯಗಳನ್ನು ಒದಗಿಸುವುದರ ಜೊತೆಗೆ ಕಟ್ಟಡಗಳ ನಿರ್ವಹಣೆಗೆ ಹಾಗೂ ಮೇಲ್ವಿಚಾರಣೆಗೆ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಹೆಚ್ಚಿನ ಅಧಿಕಾರ ಮತ್ತು ಜವಾಬ್ದಾರಿ ನೀಡಬೇಕೆಂದೂ ಸಮಿತಿ ತನ್ನ ವರದಿಯಲ್ಲಿ ಹೇಳಿದೆ.

************

ಡಿ ಪಿ ಎಂ